# ಕರ್ನಾಟಕದ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 304 |
| ಉತ್ತರಿಸಬೇಕಾದ ದಿನಾಂಕ | 06.03.2025 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ-48ರ ಪಕ್ಕದಲ್ಲಿ ಹೊಸ ಜಿಲ್ಲಾಮಟ್ಟದ ಕ್ರೀಡಾಂಗಣವನ್ನು ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು, ಸದರಿ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆಯೇ; | ಇಲ್ಲ |
| ಆ) | ಇದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವ ಕಾಲ ಮಿತಿಯಲ್ಲಿ ಪ್ರಾರಂಭಿಸಲಾಗುವುದು ಮತ್ತು ಪೂರ್ಣಗೊಳಿಸಲಾಗುವುದು ಯಾವಾಗ; | ಬೆಳಗಾವಿ ನಗರದಲ್ಲಿ ಹೊಸ ಜಿಲ್ಲಾ ಕ್ರೀಡಾಂಗಣವನ್ನು ಒಟ್ಟಾರೆ 16 ಎಕರೆ 37 ಗುಂಟೆ ನಿವೇಶನದಲ್ಲಿ ಲೋಕೋಪಯೋಗಿ ಇಲಾಖೆಯ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ನಿರ್ಮಿಸಲು ದಿನಾಂಕ:21.02.2025 ರಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅನುಮೋದನೆ ನೀಡಿರುತ್ತದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಹೊಸ ಜಿಲ್ಲಾ ಕ್ರೀಡಾಂಗಣ ಸಮುಚ್ಚಯ ನಿರ್ಮಾಣಕ್ಕೆ ಮಂಜೂರಾಗಿರುವ ನಿವೇಶವನ್ನು ಸರ್ವೇ ಮಾಡಿಸಿ, ಎಲ್ಲಾ ರೀತಿಯ ಹೊರಾಂಗಣ ಮತ್ತು ಒಳಾಂಗಣ ಕ್ರೀಡೆಗಳಿಗೆ ಸಂಬಂಧಿಸಿದ ಸೌಕರ್ಯಗಳನ್ನು ಕಲ್ಪಿಸಲು ಮಾಸ್ಟರ್ ಪ್ಲಾನ್ ತಯಾರಿಸಿ, ಲೋಕೋಪಯೋಗಿ ಇಲಾಖೆಗೆ ಒದಗಿಸಲು ಕ್ರಮ ವಹಿಸಲಾಗುತ್ತಿದೆ. ಮಾಸ್ಟರ್ ಪ್ಲಾನ್ ರೂಪಿಸಿದ ನಂತರ ವಿವರವಾದ ಅಂದಾಜು ಪಟ್ಟಿಯನ್ನು ತಯಾರಿಸಿ, ನಿಯಮಾನುಸಾರ ಲೋಕೋಪಯೋಗಿ ಇಲಾಖೆ ವತಿಯಿಂದ ಟೆಂಡರ್ ಆಹ್ವಾನಿಸಿ, ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |
| ಇ) | ಬೆಳಗಾವಿ ಜಿಲ್ಲೆಯ ಯಲ್ಲೂರು ಗ್ರಾಮದ ಹತ್ತಿರ ಸುಮಾರು 66 ಎಕರೆ ಸರ್ಕಾರಿ ಭೂಮಿಯಲ್ಲಿ ಅತ್ಯಾಧುನಿಕ ಅಂತರರಾಷ್ಟ್ರೀಯ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು ನಿಜವೇ; | ಹೌದು |
| ಈ) | ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ | ಬೆಳಗಾವಿ ಜಿಲ್ಲೆಯ ಯಳ್ಳೂರು ಗ್ರಾಮದಲ್ಲಿ ಕ್ರೀಡಾಂಗಣವನ್ನು ನಿರ್ಮಿಸಲು ಯುವ ಸಬಲೀಕರಣ ಮತ್ತು |

| | | |
|---|---|---|
| | ಪ್ರಾರಂಭಿಸಲಾಗುವುದು ಮತ್ತು ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು: | ಕ್ರೀಡಾ ಇಲಾಖೆಗೆ ನಿವೇಶನ ಹಸ್ತಾಂತರವಾಗಿರುವುದಿಲ್ಲ.<br><br>ಬೆಳಗಾವಿ ತಾಲ್ಲೂಕಿನ ಯಳ್ಳೂರು ಗ್ರಾಮದಲ್ಲಿ ಕ್ರೀಡಾ ಸಂಕೀರ್ಣ ನಿರ್ಮಿಸಲು ಜಿಲ್ಲಾಧಿಕಾರಿಗಳು, ಬೆಳಗಾವಿ ಇವರ ದಿನಾಂಕ:13-12-2022ರ ಆದೇಶದಲ್ಲಿ ಯಳ್ಳೂರು ಗ್ರಾಮದ ರಿ.ಸ.ನಂ.1142 ರಲ್ಲಿನ 66 ಎಕರೆ 17 ಗುಂಟೆ ಪೈಕಿ 40 ಎಕರೆ ಜಮೀನನ್ನು ಕರ್ನಾಟಕದ ಮೇಲ್ಮನವಿ ನ್ಯಾಯಾಧೀಕರಣದ ತಡೆಯಾಜ್ಞೆ ಇರುವ ರಿ.ಸ.ನಂ.1142/ಬ ರಲ್ಲಿ 05 ಎಕರೆ ಕ್ಷೇತ್ರದ ಜಮೀನನ್ನು ಹೊರತುಪಡಿಸಿ (1) ಇಂದಿರಾ ಆವಾಸ್ ಯೋಜನೆ ಮನೆಗಳು=00ಎ-20ಗು (2) ಸರ್ಕಾರಿ ಕಿರಿಯ ಪ್ರಾಥಮಿಕ ಮರಾಠಿ ಶಾಲೆ=02ಎ-00ಗು (3) ಪ್ರಾಥಮಿಕ ಆರೋಗ್ಯ ಕೇಂದ್ರ=00ಎ-20ಗು (4) ಸಿದ್ಧಕಲಾ ಟ್ರಸ್ಟ್ ಕಟ್ಟಡ=02ಎ-00ಗು (5) ಘನತ್ಯಾಜ್ಯ ನಿರ್ವಹಣೆ ಘಟಕ ಜಾಗ=00ಎ-20ಗು ಹಾಗೂ (6) ಅನಧಿಕೃತ ಮನೆ ಕಟ್ಟಡಗಳು, ಇವುಗಳನ್ನು ಸ್ಥಳಾಂತರಿಸುವ ಷರತ್ತಿಗೊಳಪಟ್ಟು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಉಚಿತವಾಗಿ ಮಂಜೂರು ಮಾಡಲಾಗಿರುತ್ತದೆ.<br><br>ಜಮೀನು ಮಂಜೂರಾತಿ ಆದೇಶದಲ್ಲಿ ತಿಳಿಸಿರುವಂತೆ ನಿವೇಶನದಲ್ಲಿರುವ ಕಟ್ಟಡಗಳನ್ನು ಸ್ಥಳಾಂತರಿಸಿದ ನಂತರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸಿದಲ್ಲಿ, ಮುಂದಿನ ಕ್ರಮ ವಹಿಸಲಾಗುವುದು. |
| ಉ) | ಬೆಳಗಾವಿ ನಗರದಲ್ಲಿ ವತಿಯಿಂದ ಈ ಹಿಂದೆ ಆಟೋ ನಗರ, ಕಣ್ಣಬರಗಿಯಲ್ಲಿ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಿ ಬೆಳಗಾವಿ ಜಿಲ್ಲೆ ಯುವಕರಿಗೆ ಕ್ರಿಕೆಟ್ ಕ್ರೀಡೆಯಲ್ಲಿ ಹೆಚ್ಚಿನ ಅವಕಾಶಗಳನ್ನು ನೀಡಲು ಯೋಜಿಸಿದ್ದು, ಸದರಿ ಕ್ರೀಡಾಂಗಣದ ಪ್ರಸ್ತುತ ಹಂತವೇನು: | ಬೆಳಗಾವಿ ನಗರದ ಕಣ್ಣಬರಗಿಯಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲಾಗಿರುವುದಿಲ್ಲ. ಸದರಿ ಕ್ರೀಡಾಂಗಣವನ್ನು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ವತಿಯಿಂದ ನಿರ್ಮಿಸಲಾಗಿದ್ದು, ಸಾರ್ವಜನಿಕರ ಬಳಕೆಯಲ್ಲಿದ್ದು, ಈ ಕ್ರೀಡಾಂಗಣವು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವ್ಯಾಪ್ತಿಗೊಳಪಡುವುದಿಲ್ಲ. |
| ಊ) | ಸದರಿ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುತ್ತದೆ? (ಮಾಹಿತಿ ನೀಡುವುದು) | ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/13/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ



ile No. YSD-EBB/13/2025-YSD_DO-YOUTH SEC (Computer No. 1698029)